ಕನ್ನಡಪ್ರಭ
ಸೋಮವಾರ 4.05.2026

ಗರಿಷ್ಠ 36°c | ಕನಿಷ್ಠ 23°c

ಸುದ್ದಿ ಸಿಂಚನ

ಸಂಭ್ರಮದ ವೀರಭದ್ರೇಶ್ವರ ರಥೋತ್ಸವ



ನರಗುಂದ: ತಾಲೂಕಿನ ಹದಲಿ ಗ್ರಾಮದ ವೀರಭದ್ರೇಶ್ವರ ರಥೋತ್ಸವ ಸಹಸ್ರಾರು ಭಕ್ತರ ಮಧ್ಯೆ ಶುಕ್ರವಾರ ಸಡಗರ ಸಂಭ್ರಮದಿಂದ ಅದ್ಧೂರಿಯಾಗಿ ಜರುಗಿತು. ಸುಮಂಗಲೆಯರಿಂದ ಆರತಿ, ಗ್ರಾಮದ ಸರ್ವ ಯುವಕ ಮಂಡಳ, ಭಜನಾ ಮೇಳದವರಿಂದ ಕರಡಿ ಮಜಲು, ಡೊಳ್ಳು ಸಂಭಾಳ, ಪುರವಂತಿಕೆ, ವೀರಗಾಸೆ, ಸಕಲ ವಾದ್ಯಗಳೊಂದಿಗೆ ಸಂಭ್ರಮದಿಂದ ರಥೋತ್ಸವ ನಡೆಯಿತು. ರಥೋತ್ಸವ ಪೂರ್ವದಲ್ಲಿ ಆರತಿಯೊಂದಿಗೆ ಅಲಂಕೃತ ಬಾಲ ಬಸವಣ್ಣನ ಮೆರವಣಿಗೆ ಮೂಲಕ ವೀರಭದ್ರೇಶ್ವರ ಪಾದಗಟ್ಟೆಯವರೆಗೆ ಕರೆತರಲಾಯಿತು. ನಂತರ ನಡೆದ ರಥೋತ್ಸವದಲ್ಲಿ ಸುತ್ತಲಿನ ಗ್ರಾಮಗಳಿಂದ ಸಹಸ್ರಾರು ಭಕ್ತರು ಪಾಲ್ಗೊಂಡಿದ್ದರು.

ಕಾಂಗ್ರೆಸ್ ಉಸ್ತುವಾರಿಯಾಗಿ ಬಸವರಡ್ಡಿ ನೇಮಕ

ಡಂಬಳ: ಗದಗ ವಿಧಾನಸಭಾ ಮತಕ್ಷೇತ್ರದ ಯುವ ಕಾಂಗ್ರೆಸ್ ಸಮಿತಿ ಉಸ್ತುವಾರಿಯಾಗಿ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಬಸವರಡ್ಡಿ ಬಂಡಿಹಾಳ ಅವರನ್ನು ನೇಮಕ ಮಾಡಲಾಗಿದೆ. ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ರಾಜ್ಯಾಧ್ಯಕ್ಷ ಮಂಜುನಾಥಗೌಡ ಅವರ ನಿರ್ದೇಶನದ ಮೇರೆಗೆ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಅವರು ಈ ನೇಮಕಾತಿ ಮಾಡಿ ಅಧಿಕೃತ ಆದೇಶ ಹೊರಡಿಸಿದ್ದಾರೆ.



ಬಸವರಡ್ಡಿ ಬಂಡಿಹಾಳ ಅವರನ್ನು ಪಕ್ಷದ ಹಿರಿಯ ಮುಖಂಡರು, ಸ್ಥಳೀಯ ನಾಯಕರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಅಭಿನಂದಿಸಿದ್ದಾರೆ.

ಪಾಸ್‌ಪೋರ್ಟ್ ಸೇವೆಗಳ ಸದುಪಯೋಗಕ್ಕೆ ಮನವಿ

ಗದಗ: ನಗರದ ಸಿಟಿ ಅಂಚೆ ಕಚೇರಿಯಲ್ಲಿರುವ ಪಾಸ್‌ಪೋರ್ಟ್ ಸೇವಾ ಕೇಂದ್ರದಲ್ಲಿ ಸಾರ್ವಜನಿಕರು ವಿವಿಧ ಸೇವೆಗಳನ್ನು ಪಡೆಯಬಹುದು ಎಂದು ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಕೇಂದ್ರದಲ್ಲಿ ಹೊಸ ಪಾಸ್‌ಪೋರ್ಟ್, ನವೀಕರಣ, ಹೆಸರು- ವಿಳಾಸ ತಿದ್ದುಪಡಿ, ಕಳೆದುಹೋದ ಪಾಸ್‌ಪೋರ್ಟ್ ಮರುಜಾರಿ ಹಾಗೂ ಅಪ್ರಾಪ್ತರ ಅರ್ಜಿ ಸಲ್ಲಿಕೆಗೆ ಅವಕಾಶವಿದೆ. ಅರ್ಜಿದಾರರು ಮೊದಲು www.passportindia.gov.in ಜಾಲತಾಣದಲ್ಲಿ ಅರ್ಜಿ ಸಲ್ಲಿಸಿ, ಕೇಂದ್ರದ ಆಯ್ಕೆಯಲ್ಲಿ ಗದಗ ಸಿಟಿ ಪಾಸ್‌ಪೋರ್ಟ್ ಕೇಂದ್ರವನ್ನು ಆರಿಸಿಕೊಳ್ಳಬೇಕು. ನಂತರ ನಿಗದಿತ ಸಮಯದಲ್ಲಿ ಮೂಲ ದಾಖಲೆಗಳೊಂದಿಗೆ ಕೇಂದ್ರಕ್ಕೆ ಭೇಟಿ ನೀಡಿ ಸೌಲಭ್ಯ ಪಡೆಯುವಂತೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.



ಗದುಗಿನ ತೋಂಟದಾರ್ಯ ಮಠದ ಜಾತ್ರೆಯಲ್ಲಿ ಅವಘಡ ಖಂಡಿಸಿ ತೋಂಟದಾರ್ಯ ಮಠದ ಮುಂದೆ ಭಾನುವಾರ ರಾತ್ರಿ ಹಿಂದುಪರ ಸಂಘಟನೆ ಮುಖಂಡ ರಾಜು ಖಾನಪ್ಪನವರ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.



ಗದುಗಿನ ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ಉದ್ಯಾನವನ ಕಾಮಗಾರಿಗೆ ನಗರಸಭೆ ಸದಸ್ಯ ವಿನಾಯಕ ಮಾನ್ವಿ ಭೂಮಿಪೂಜೆ ನೆರವೇರಿಸಿದರು. ಶಿವಯ್ಯ ನಾಲ್ವತವಾಡಮಠ, ಅಶೋಕ ಸಂಕಣ್ಣವರ, ಸಿ.ಎಸ್. ಚೆಟ್ಟಿ ಇತರರು ಇದ್ದರು.

ಉದ್ಯಾನ ಕಾಮಗಾರಿಗೆ ಭೂಮಿಪೂಜೆ

• **ಕನ್ನಡಪ್ರಭ ವಾರ್ತೆ** ಗದಗ

ನಗರದ ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ಉದ್ಯಾನವನ ಕಾಮಗಾರಿಗೆ ನಗರಸಭೆ ಸದಸ್ಯ ವಿನಾಯಕ ಮಾನ್ವಿ ಭೂಮಿಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಈಗಾಗಲೇ ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ಸುತ್ತ ತಂತಿಬೇಲಿ ನಿರ್ಮಿಸಿದ್ದು, ಅದೇ ರೀತಿ ಬೀದಿದೀಪ, ನೀರಿನ ವ್ಯವಸ್ಥೆ ಸೇರಿದಂತೆ ಪ್ರಮುಖ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ.

ಈ ರುದ್ರಭೂಮಿಯಲ್ಲಿ ಈಗ ನಗರಾಭಿವೃದ್ಧಿ ಪ್ರಾಧಿಕಾರದ ಅನುದಾನದಲ್ಲಿ ಅಚ್ಚುಕಟ್ಟಾದ, ಗುಣಮಟ್ಟದ ಉದ್ಯಾನವನ್ನು ಗುತ್ತಿಗೆದಾರರು ನಿರ್ಮಾಣ ಮಾಡಬೇಕೆಂದರು.

ಈ ವೇಳೆ ಶಿವಯ್ಯ ನಾಲ್ವತವಾಡಮಠ, ಅಶೋಕ ಸಂಕಣ್ಣವರ, ಸಿ.ಎಸ್. ಚೆಟ್ಟಿ ವಕೀಲರು, ವಿರುಪಾಕ್ಷಪ್ಪ ಅಕ್ಕಿ, ಸಿದ್ದಣ್ಣ ಅರಳಿ, ಗುತ್ತಿಗೆದಾರ ನಾರಾಯಣ ರಂಗ್ರೇಜ್, ವಿ.ಎಚ್. ದೇಸಾಯಿಗೌಡ್ರ, ಈಶ್ವರ ಕೋಟಿ, ಬಾಲಚಂದ್ರ ಭರಮಗೌಡರ ಇದ್ದರು.

ಜೈಂಟ್ ವೀಲ್ ಮುರಿದು ಬಿದ್ದು 22 ಜನರಿಗೆ ಗಾಯ

ಇಬ್ಬರು ಗಂಭೀರ | ಗದುಗಿನ ತೋಂಟದಾರ್ಯ ಮಠದ ಜಾತ್ರೆಯಲ್ಲಿ ಅವಘಡ



ಘಟನೆಯಲ್ಲಿ ಗಾಯಗೊಂಡವರಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವುದು.



ಘಟನೆಯ ಸ್ಥಳದಲ್ಲಿ ಆಟಿಕೆ ಮುರಿದು ಬಿದ್ದಿರುವುದು.

• **ಕನ್ನಡಪ್ರಭ ವಾರ್ತೆ** ಗದಗ

ನಗರದ ಐತಿಹಾಸಿಕ ಹಿನ್ನೆಲೆ ಹೊಂದಿರುವ ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಅಳವಡಿಸಲಾಗಿರುವ ಜೈಂಟ್ ವೀಲ್ (ಬೃಹತ್ ಆಟಿಕೆ)ಯೊಂದು ಮುರಿದುಬಿದ್ದು ಮಗು ಸೇರಿದಂತೆ 22 ಜನರು ಗಾಯಗೊಂಡ ಘಟನೆ ಭಾನುವಾರ ರಾತ್ರಿ ನಡೆದಿದೆ.

ಬ್ರೆಕ್ ಡ್ಯಾನ್ಸ್ ಹೆಸರಿನ ಬೃಹತ್ ಆಟಿಕೆಯಲ್ಲಿ ಎಂದಿನಂತೆ ಹಲವಾರು ಜನರು ಆಟವಾಡುತ್ತಿದ್ದರು. ಸಾವಿರಾರು ಜನರು ವೀಕ್ಷಣೆ ಮಾಡುತ್ತಿದ್ದ ವೇಳೆ ಈ ಘಟನೆ ನಡೆದಿದ್ದು, ಕ್ಷಣಾರ್ಧದಲ್ಲಿ ಸ್ಥಳದಲ್ಲಿ ಅಲ್ಲೋಲ ಕಲ್ಲೋಲವೇ ಸೃಷ್ಟಿಯಾಯಿತು.

ಈ ಬೃಹತ್ ಆಟಿಕೆ ಯಂತ್ರವೊಂದು ತಾಂತ್ರಿಕ ದೋಷದಿಂದ ಮುರಿದು ಬಿದ್ದ ಪರಿಣಾಮ ಅದರಲ್ಲಿ ಆಟವಾಡುತ್ತಿದ್ದವರಲ್ಲಿ 22 ಜನರಿಗೆ ಗಾಯವಾಗಿದ್ದು, ಅವರಲ್ಲಿ ಇಬ್ಬರ ಸ್ಥಿತಿ ತೀರಾ ಗಂಭೀರವಾಗಿದೆ.

ಗಂಭೀರವಾಗಿ ಗಾಯಗೊಂಡ ಹುಬ್ಬಳ್ಳಿಯ ಮುಸ್ತಾಕ್ ಬಾಬು ಸಾಬ್ ಹಳೆಮನಿ ಎಂಬವರನ್ನು ಹುಬ್ಬಳ್ಳಿಯ ಕೆಎಂಸಿಆರ್‌ಗೆ ದಾಖಲಿಸಲಾಗಿದ್ದು, ಉಳಿದವರನ್ನು ಗದುಗಿನ ಜಿಲ್ಲಾಸ್ಪತ್ರೆ ಹಾಗೂ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಜಾತ್ರೆಯ ನಿಮಿತ್ತ ಅಳವಡಿಸಲಾಗಿದ್ದ ಹಲವಾರು ಎತ್ತರದ ಆಟಿಕೆ ಯಂತ್ರಗಳಲ್ಲಿ ಪ್ರವಾಸಿಗರು ಹಾಗೂ

- ಬ್ರೆಕ್ ಡ್ಯಾನ್ಸ್ ಹೆಸರಿನ ಬೃಹತ್ ಆಟಿಕೆಯಲ್ಲಿ ಎಂದಿನಂತೆ ಹಲವಾರು ಜನರು ಆಟವಾಡುತ್ತಿದ್ದರು
- ಸಾವಿರಾರು ಜನರು ವೀಕ್ಷಣೆ ಮಾಡುತ್ತಿದ್ದ ವೇಳೆ ಈ ಘಟನೆ ನಡೆದಿದೆ
- ಗಂಭೀರವಾಗಿ ಗಾಯಗೊಂಡ ಹುಬ್ಬಳ್ಳಿಯ ಮುಸ್ತಾಕ್ ಬಾಬು ಸಾಬ್ ಹಳೆಮನಿ ಎಂಬವರನ್ನು ಹುಬ್ಬಳ್ಳಿಯ ಕೆಎಂಸಿಆರ್‌ಗೆ ದಾಖಲಿಸಲಾಗಿದೆ
- ಬ್ರೆಕ್ ಡ್ಯಾನ್ಸ್ ಹೆಸರಿನ ಆಟಿಕೆಯು ವೇಗದಲ್ಲಿ ಸುತ್ತುತ್ತಿದ್ದ ಸಂದರ್ಭದಲ್ಲಿ ದಿಢೀರನೆ ಅದರ ಒಂದು ಭಾಗ ತುಂಡಾಗಿ ಬಿದ್ದಿದೆ
- ಆಟಿಕೆ ತುಂಬೆಲ್ಲಾ ರಕ್ತ ಸಿಡಿದಿದ್ದು, ಘಟನೆಯ ಭೀಕರತೆಯನ್ನು ಹೇಳುವಂತಿತ್ತು

ಸ್ಥಳೀಯರು ಉತ್ಸಾಹದಿಂದ ಆಟವಾಡುತ್ತಿದ್ದರು. ಬ್ರೆಕ್ ಡ್ಯಾನ್ಸ್ ಹೆಸರಿನ ಆಟಿಕೆಯು ವೇಗದಲ್ಲಿ ಸುತ್ತುತ್ತಿದ್ದ ಸಂದರ್ಭದಲ್ಲಿ ದಿಢೀರನೆ ಅದರ ಒಂದು ಭಾಗ ತುಂಡಾಗಿ ಬಿದ್ದಿದೆ. ಪರಿಣಾಮವಾಗಿ ಅದರಲ್ಲಿದ್ದ ಹಲವಾರು ಜನರು ವೇಗವಾಗಿ ಎತ್ತರದಿಂದ ಬಿದ್ದ ಹಿನ್ನೆಲೆ ಹಲವರು ರಕ್ತದ ಮಡುವಿನಲ್ಲಿ ಬಿದ್ದಿದ್ದಾರೆ.

ಆಟಿಕೆ ತುಂಬೆಲ್ಲಾ ರಕ್ತ ಸಿಡಿದಿದ್ದು, ಘಟನೆಯ ಭೀಕರತೆಯನ್ನು ಹೇಳುವಂತಿತ್ತು. ಇದರಿಂದಾಗಿ ಜಾತ್ರಾ ಮೈದಾನದಲ್ಲಿ ಕ್ಷಣಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಘಟನೆ ಸಂಭವಿಸುತ್ತಿದ್ದಂತೆ ಅಕ್ಕಪಕ್ಕದಲ್ಲಿದ್ದ ಸಾರ್ವಜನಿಕರು ಹಾಗೂ ಸ್ಥಳಕ್ಕೆ ಆಗಮಿಸಿದ ಪೊಲೀಸರು ತಕ್ಷಣವೇ ರಕ್ಷಣಾ ಕಾರ್ಯಕ್ಕೆ ಧಾವಿಸಿದ್ದಾರೆ. ಗಾಯಗೊಂಡವರನ್ನು ಪೊಲೀಸರು ಸಾರ್ವಜನಿಕರ ನೆರವಿನೊಂದಿಗೆ ಆ್ಯಂಬುಲೆನ್ಸ್ ಹಾಗೂ ಖಾಸಗಿ ವಾಹನಗಳ ಮೂಲಕ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ಪ್ರತಿಭಟನೆ...

ಜಾತ್ರೆ ಹೆಸರಿನಲ್ಲಿ ತಿಂಗಳಾನುಗಟ್ಟಲೆ ಈ ರೀತಿಯ ಬೃಹತ್ ಆಟಿಕೆಗಳ ಅಳವಡಿಸಲು ಅವಕಾಶ ಕೊಡಬಾರದು ಎಂದು ಈ ಹಿಂದೆಯೇ ಹೋರಾಟ ಮಾಡುತ್ತಿದ್ದ ಹಿಂದುಪರ ಸಂಘಟನೆ ಮುಖಂಡ ರಾಜು ಖಾನಪ್ಪನವರ ಭಾನುವಾರ ರಾತ್ರಿಯೇ ತೋಂಟದಾರ್ಯ ಮಠದ ಮುಂದೆ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಕಾಲುವೆ ಹೂಳೆತ್ತಲು ಆಗ್ರಹ

ಡಂಬಳದಲ್ಲಿ ರೈತರಿಂದ ಉಪತಹಸೀಲ್ದಾರರಿಗೆ ಮನವಿ



ಡಂಬಳದಲ್ಲಿ ಉಪತಹಸೀಲ್ದಾರರಿಗೆ ರೈತರು ಮನವಿ ಸಲ್ಲಿಸಿದರು.

• **ಕನ್ನಡಪ್ರಭ ವಾರ್ತೆ** ಡಂಬಳ

ಗ್ರಾಮದ ಚಿಕ್ಕ ನೀರಾವರಿ ಇಲಾಖೆಯ ವ್ಯಾಪ್ತಿಯ ಕೆರೆ ನೀರಾವರಿ ಕಾಲುವೆಗಳ ದಕ್ಷಿಣ ಹಾಗೂ ಪೂರ್ವ ಭಾಗಗಳು ಸಂಪೂರ್ಣವಾಗಿ ಹೂಳು ತುಂಬಿಕೊಂಡಿರುವುದರಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕಾಲುವೆಗಳನ್ನು ಸ್ವಚ್ಛಗೊಳಿಸುವಂತೆ ರೈತರು ಡಂಬಳ ಗ್ರಾಮದ ಉಪತಹಸೀಲ್ದಾರ್‌ಕಚೇರಿಗೆ ಮನವಿ ಸಲ್ಲಿಸಿದರು.

ಮುಂಗಾರು ಹಂಗಾಮು ಪ್ರಾರಂಭವಾಗುತ್ತಿರುವ ಈ ಸಂದರ್ಭದಲ್ಲಿ ಕೆರೆಯಲ್ಲಿ ಅಪಾರ ಪ್ರಮಾಣದಲ್ಲಿ ನೀರು ಲಭ್ಯವಿದ್ದರೂ ಕಾಲುವೆಗಳಲ್ಲಿ ಮುಳ್ಳು, ಕಂಟಿ ಹಾಗೂ ಹೂಳು ತುಂಬಿಕೊಂಡಿರುವ ಕಾರಣ ನೀರು ಮುಂದೆ ಸಾಗದಂಥ ಸ್ಥಿತಿ ನಿರ್ಮಾಣವಾಗಿದೆ. ಈ ಕಾಲುವೆಗಳ ಮೂಲಕ ಸುಮಾರು ಎರಡು ಸಾವಿರ ಎಕರೆ ಭೂಮಿಗೆ ನೀರಾವರಿ ಸೌಲಭ್ಯವಿದ್ದು, ಅನೇಕ ರೈತ ಕುಟುಂಬಗಳು ಇದನ್ನೇ ಅವಲಂಬಿಸಿ ಜೀವನ ನಡೆಸುತ್ತಿವೆ. ಆದರೆ, ಕಾಲುವೆಗಳ ದುಸ್ಥಿತಿಯಿಂದ ಬೆಳೆಗಳಿಗೆ ನೀರು ತಲುಪದೇ ರೈತರು ಆರ್ಥಿಕ ಹಿನ್ನಡೆಯ ಭೀತಿ ಎದುರಿಸುತ್ತಿದ್ದಾರೆ.

ಕಾಲುವೆಗಳಲ್ಲಿ ಸಂಪೂರ್ಣ ಹೂಳು ತುಂಬಿರುವುದರಿಂದ ತುರ್ತು ಕ್ರಮ ಅಗತ್ಯವಿದೆಎಂದುರೈತರುಒತ್ತಾಯಿಸಿದರು. ಮನವಿಗೆ ಸ್ಪಂದಿಸಿ ಎಂಟು ದಿನಗಳೊಳಗೆ ಸ್ವಚ್ಛತಾ ಕಾರ್ಯ ಆರಂಭಿಸದಿದ್ದರೆ ಸಂಬಂಧಿಸಿದ ಇಲಾಖೆಯ ಕಚೇರಿ ಮುಂದೆ ಬೃಹತ್ ಉಪವಾಸ ಸತ್ಯಾಗ್ರಹ ಕೈಗೊಳ್ಳುವುದಾಗಿ ರೈತರು ಎಚ್ಚರಿಕೆ ನೀಡಿದರು.

ರೈತ ಬುಡ್ನೆಸಾಬ ಅತ್ತಾರ ಮನವಿ ಓದಿ, ಕಂದಾಯ ಇಲಾಖೆಯ ಅಧಿಕಾರಿ ಎಂ.ಎಂ. ವಿಭೂತೆ ಅವರಿಗೆ ಸಲ್ಲಿಸಿದರು. ಮನವಿ ಸ್ವೀಕರಿಸಿದ ಅಧಿಕಾರಿ, ಈ ಕುರಿತು ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿ ಶೀಘ್ರ ಕ್ರಮ ಕೈಗೊಳ್ಳುವಂತೆ ತಿಳಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರಾಮಪ್ಪ ಯಂಡಿಗೇರಿ, ಮಲ್ಲಪ್ಪ ಗಡಗಿ, ಶಿವಪ್ಪ ಬಂಡಿ, ರಾಜಪ್ಪ ಪಟ್ಟಣಶೆಟ್ಟಿ, ರಾಜಶೇಖರ ಪಟ್ಟಣಶೆಟ್ಟಿ, ಎಸ್.ಆರ್. ಪಲ್ಲೇದ, ಹುಸೇನಸಾಬ ಕಾಸ್ತಾರ, ಮಂಜುನಾಥ ಕೆರಿ, ಜಾಕೀರ ಮೂಲಿಮನಿ, ಎಂ.ಎನ್. ಕೋರ್ಲಹಳ್ಳಿ, ಎಂ.ಎಸ್. ಪಲ್ಲೇದ, ವಿ.ವೈ. ರಾಘಣ್ಣವರ, ಎಚ್.ವೈ. ಗಡಗಿ, ಬಸವರಾಜ ಪಟ್ಟಣಶೆಟ್ಟಿ, ಅಶೋಕ ಚಿಕರಡ್ಡಿ, ಮಂಜುನಾಥ ಕರದಾನಿ, ಪರಮೇಶ ಓಲೇಕಾರ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

6ರಂದು ಕಸಾಪ ಸಂಸ್ಥಾಪನಾ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಮುಂಡರಗಿ

ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕ ಹಾಗೂ ಕ.ರಾ. ಬೆಲ್ಲದ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಆಶ್ರಯದಲ್ಲಿ ಮೇ 6ರಂದು ಬೆಳಗ್ಗೆ 9.30ಕ್ಕೆ ಸ್ಥಳೀಯ ಕ.ರಾ. ಬೆಲ್ಲದ ಕಾಲೇಜಿನ ಸಭಾಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ತಾಲೂಕು ಕಸಾಪ ಅಧ್ಯಕ್ಷ ಪ್ರೊ. ಎಂ.ಜಿ. ಗಚ್ಚಣ್ಣನವರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಜ.ಅ. ವಿದ್ಯಾ ಸಮಿತಿ ಆಡಳಿತಾಧಿಕಾರಿ ಡಾ. ಬಿ.ಜಿ. ಜವಳಿ ಉದ್ಘಾಟಿಸಲಿದ್ದಾರೆ. ಹೆಸರೂರು ಸರ್ಕಾರಿ ಪ್ರೌಢಶಾಲೆ ಶಿಕ್ಷಕ ರವಿ ದೇವರಡ್ಡಿ ಕನ್ನಡ ಸಾಹಿತ್ಯ ಪರಿಷತ್ತು ನಡೆದು ಬಂದ ದಾರಿ ಕುರಿತು ಉಪನ್ಯಾಸ ನೀಡಲಿದ್ದಾರೆ.

ಅತಿಥಿಗಳಾಗಿ ಬಿಇಒ ಗಂಗಾಧರ ಅಣ್ಣಿಗೇರಿ, ಪ್ರಾ. ಡಾ. ಸಂತೋಷ ಹಿರೇಮಠ, ಪತ್ರಕರ್ತ ಕಾಶೀನಾಥ ಬಿಳಿಮಗ್ಗದ ಉಪಸ್ಥಿತರಿರುವರು. ಕಾರ್ಯಕ್ರಮದಲ್ಲಿ ಕಳೆದ ಮಾರ್ಚ್ ತಿಂಗಳಿನಲ್ಲಿ ಜರುಗಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 100ಕ್ಕೆ 100ರಷ್ಟು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಗುತ್ತಿದೆ. ನಂತರ ನಾಟ್ಯಬಿಂದು ಅಕಾಡೆಮಿ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ತಾಲೂಕು ಕಸಾಪ ಕಾರ್ಯದರ್ಶಿ ವೀಣಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಲ್ಪಸಂಖ್ಯಾತರ ಅಭಿವೃದ್ಧಿಗೆ ₹650 ಕೋಟಿ: ಆಕ್ಷೇಪ

• **ಕನ್ನಡಪ್ರಭ ವಾರ್ತೆ** ಗದಗ



ಹಿರೇಮಠ

ರಾಜ್ಯ ಕಾಂಗ್ರೆಸ್ ಸರ್ಕಾರ ಅಲ್ಪಸಂಖ್ಯಾತರ ಕಾಲನಿಗಳ ಅಭಿವೃದ್ಧಿಗಾಗಿ ₹650 ಕೋಟಿಗಳನ್ನು ನೀಡಬೇಕೆಂದು ಇತ್ತೀಚೆಗೆ ನಡೆದ ಸಚಿವ ಸಂಪುಟದ ಸಭೆಯಲ್ಲಿ ತೀರ್ಮಾನ ಕೈಗೊಂಡಿದ್ದು, ಇದೊಂದು ತುಘಲಕ್ ಸರ್ಕಾರದ ತೀರ್ಮಾನವಾಗಿದೆ ಎಂದು ಜಿಲ್ಲಾ ಬಿಜೆಪಿ ವಕ್ತಾರ ಎಂ.ಎಂ. ಹಿರೇಮಠ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸಚಿವ ಸಂಪುಟದ ಸಭೆಯಲ್ಲಿ ಅಲ್ಪಸಂಖ್ಯಾತರಿಗೆ ಮತ್ತೆ ₹650 ಕೋಟಿ ನೀಡಲು ತೀರ್ಮಾನ ಕೈಗೊಂಡಿದ್ದು, ಈ ಕಾಂಗ್ರೆಸ್ ಸರ್ಕಾರ ಪದೇ ಪದೇ ಅಲ್ಪಸಂಖ್ಯಾತರನ್ನು ಓಲೈಸಲು ಹಣವನ್ನು ನೀಡುತ್ತಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಹಿಂದೂಗಳು ಮತಗಳನ್ನು ಹಾಕಿಲ್ಲವೇ? ಮೇಲಿಂದ ಮೇಲೆ ಹಿಂದೂಗಳಿಗೆ ಅಪಮಾನವನ್ನು ಮಾಡುತ್ತಿರುವುದು ಅಕ್ಷಮ್ಯ ಅಪರಾಧ. ಕಾಂಗ್ರೆಸ್ ಸರ್ಕಾರದ ಪಾಪದ ಕೊಡ ತುಂಬಿದೆ. ಈ ಸರ್ಕಾರವನ್ನು ರಾಜ್ಯದ ಜನ ಕ್ಷಮಿಸುವುದಿಲ್ಲ.

ಹಿಂದೂಗಳ ಅಭಿವೃದ್ಧಿಗಾಗಿ 1 ಪೈಸೆಯನ್ನು ಕೂಡ ಕೊಡದೇ ಕೇವಲ ಅಲ್ಪಸಂಖ್ಯಾತರ ಓಲೈಸಲು ಪ್ರತಿವರ್ಷ ಸಾವಿರಾರು ಕೋಟಿ ರುಪಾಯಿಗಳನ್ನು ಖರ್ಚು ಮಾಡುತ್ತಿದೆ ಎಂದಿದ್ದಾರೆ.

ಬೇಲೇರಿ, ಬಸರಕೋಡಕ್ಕೆ ಬೋರ್‌ವೆಲ್ ವ್ಯವಸ್ಥೆ

• **ಕನ್ನಡಪ್ರಭ ವಾರ್ತೆ** ಹೊಳೆಆಲೂರು

ಕಳೆದ ಎರಡು ತಿಂಗಳಿಂದ ಕುಡಿಯುವ ನೀರಿನ ತೀವ್ರ ಅಭಾವ ಎದುರಿಸುತ್ತಿರುವ ಅಮರಗೋಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಿ.ಎಸ್.ಬೇಲೇರಿ ಮತ್ತು ಬಸರಕೋಡ ಗ್ರಾಮಗಳಿಗೆ ಪ್ರತ್ಯೇಕ ಕೊಳವೆ ಬಾವಿ ಕೊರೆದು ನೀರು ಪೂರೈಸುವ ಭರವಸೆಯನ್ನು ರೋಣ ತಾಲೂಕು ಆಡಳಿತ ನೀಡಿದೆ.


₹1014 ಕೋಟಿ ಸುರಿದರೂ ಹನಿ ನೀರಿಲ್ಲ!

ಮೇ 3ರಂದು ಕನ್ನಡಪ್ರಭದಲ್ಲಿ ಪ್ರಕಟವಾಗಿದ್ದ ವರದಿ.

ಪರಿಣಾಮ

- ಎರಡೂ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರಕ್ಕೆ ಭರವಸೆ
- ರೋಣ ಶಾಸಕ ಜಿ.ಎಸ್.ಪಾಟೀಲ್ ತಕ್ಷಣ ಸ್ಪಂದನೆ, ಗ್ರಾಮಕ್ಕೆ ಅಧಿಕಾರಿಗಳ ದೌಡು

ಈ ಎರಡೂ ಗ್ರಾಮಗಳ ಕುಡಿಯುವ ನೀರಿನ ಅಭಾವ ಕುರಿತು ಕನ್ನಡಪ್ರಭ ತನ್ನ ಭಾನುವಾರದ ಸಂಚಿಕೆಯಲ್ಲಿ '₹1014 ಕೋಟಿ ಸುರಿದರೂ ಹನಿ ನೀರಿಲ್ಲ' ಶೀರ್ಷಿಕೆಯಡಿ ಪ್ರಕಟವಾದ ಸುದ್ದಿಗೆ ಸ್ಪಂದಿಸಿದರೋಣಶಾಸಕಜಿ.ಎಸ್.ಪಾಟೀಲ್, ಬೇಲೇರಿಯ ಪ್ರಮುಖರಾದ ನಿಂಗಪ್ಪ ಮೇಟಿ ಅವರಿಗೆ ಫೋನ್ ಮಾಡಿ, ತಕ್ಷಣ ಅಧಿಕಾರಿಗಳನ್ನು ನಿಮ್ಮ ಗ್ರಾಮಕ್ಕೆ ಕಳಿಸಿ ನೀರಿನ ಸಮಸ್ಯೆ ಬಗೆ ಹರಿಸುವುದಾಗಿ ಭರವಸೆ ನೀಡಿದ್ದರು.

ಶಾಸಕರ ನಿರ್ದೇಶನದಂತೆ ತಾಪಂ ಇಒ ಚಂದ್ರಶೇಖರ ಕಂದಕೂರ, ಜಿಪಂ ಎಇಇ ರೇಷ್ಮಾ, ಪಿಡಿಒ ಜಾವೂರ ಅವರು ಭಾನುವಾರ ಬೆಳಗ್ಗೆ ಉಭಯ ಗ್ರಾಮಗಳಿಗೆ ಭೇಟಿ ನೀಡಿ ನೀರಿನ ಸಮಸ್ಯೆ ಕಣ್ಣಾರೆ ಕಂಡು, ಪರ್ಯಾಯ ವ್ಯವಸ್ಥೆಗೆ ಜಾಗ ಪರಿಶೀಲನೆ ನಡೆಸಿದ ಬಳಿಕ, ಶೀಘ್ರದಲ್ಲಿ ಪ್ರತ್ಯೇಕ ಕೊಳವೆ ಬಾವಿ ಕೊರೆದು ಸಮರ್ಪಕವಾಗಿ ಕುಡಿಯುವ ನೀರು ಪೂರೈಸುವುದಾಗಿ ಭರವಸೆ ನೀಡಿ, ಗ್ರಾಮಸ್ಥರನ್ನು ಸಮಾಧಾನ ಮಾಡಿದರು. ಈ ಸಂದರ್ಭದಲ್ಲಿ ಉಭಯ ಗ್ರಾಮಗಳ ಪ್ರಮುಖರು ಇದ್ದರು.

ಲಿಂಗದೀಕ್ಷೆ | ಲಿಂಗದೀಕ್ಷೆ ಕಾರ್ಯಕ್ರಮದಲ್ಲಿ ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ

ಅಯ್ಯಾಚಾರ ಆಚಾರ, ವಿಚಾರ ಪಾಲಿಸುವ ಧಾರ್ಮಿಕ ಪ್ರಕ್ರಿಯೆ

• **ಕನ್ನಡಪ್ರಭ ವಾರ್ತೆ** ಗದಗ

ಅಯ್ಯಾಚಾರ ಎಂಬುದು ಆಚಾರ, ವಿಚಾರ ಮತ್ತು ಶಿವಾಚಾರವನ್ನು ಪಾಲಿಸುವ ಧಾರ್ಮಿಕ ಪ್ರಕ್ರಿಯೆಯಾಗಿದೆ ಎಂದು ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ನರಸಾಪೂರ ಗ್ರಾಮದ ರಂಭಾಪೂರಿ ಶಾಖಾ ಹಿರೇಮಠ ಗುರುಕುಲದಲ್ಲಿ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ ಹಾಗೂ ಅಖಿಲ ಭಾರತ ಜಂಗಮಸೇವಾಸಮಿತಿಸಂಯುಕ್ತಾಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಂಗಮ ವಟುಗಳಿಗೆ ಅಯ್ಯಾಚಾರ ಹಾಗೂ ಲಿಂಗದೀಕ್ಷೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಅಯ್ಯಾಚಾರ ವೀರಶೈವ ಲಿಂಗಾಯತ ಸಮುದಾಯದಲ್ಲಿ ಜಂಗಮ ವಟುಗಳಿಗೆ ನೀಡಲಾಗುವ ವಿಶೇಷ ದೀಕ್ಷಾ ಸಂಸ್ಕಾರವಾಗಿದೆ. ಪ್ರಪಂಚದಲ್ಲಿ



ಜಂಗಮ ವಟುಗಳ ಅಯ್ಯಾಚಾರ, ಲಿಂಗದೀಕ್ಷೆ ಕಾರ್ಯಕ್ರಮ ನಡೆಯಿತು.

ಶಿವದೀಕ್ಷೆಗಿಂತ ದೊಡ್ಡ ದೀಕ್ಷೆ ಬೇರೊಂದಿಲ್ಲ. ಶಿವದೀಕ್ಷೆ ತೆಗೆದುಕೊಂಡವರಿಗೆ ಲೌಕಿಕ ಬದುಕಿನಲ್ಲಿ ದೈವಿಗುಣ ಹೆಚ್ಚಾಗಲಿದೆ. ಧರ್ಮಾಚಣೆ ಮೂಲಕ ಲಿಂಗದೀಕ್ಷೆ ಪಡೆದುಕೊಂಡರೆ ದೇವತಾ ಮನುಷ್ಯರಾಗುತ್ತಾರೆ. ಅದೇ ರೀತಿ ಲಿಂಗದೀಕ್ಷೆ ಪಡೆದವರು ಇನ್ಮುಂದೆ ಧರ್ಮಪರಿಪಾಲನೆ ಮಾಡಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು ಎಂದು ಹೇಳಿದರು.

ಮಲ್ಲನಕೇರಿ ವಿರಕ್ತಮಠದ ಚನ್ನಬಸವ ಸ್ವಾಮೀಜಿ ಮಾತನಾಡಿ, 30 ದಿನಗಳ ಉಚಿತ ಸಂಸ್ಕಾರವನ್ನು ಹಮ್ಮಿಕೊಂಡಿದ್ದು ತುಂಬಾ ಒಳ್ಳೆಯ ವಿಷಯ. ಇಂತಹ ಕೆಲಸ ಕಾರ್ಯಗಳು ಹೆಚ್ಚು ಪ್ರಚಲಿತವಾಗಲಿ ಹಾಗೂ ಧಾರ್ಮಿಕತೆಯ ಬಗ್ಗೆ ಮಕ್ಕಳಲ್ಲಿ ಇನ್ನೂ ಹೆಚ್ಚಿನ ಜ್ಞಾನ ನೀಡುವುದು ಉತ್ತಮ ಎಂದು ತಿಳಿಸಿದರು.

ಅಖಿಲ ಭಾರತ ಜಂಗಮ ಸೇವಾ ಸಮಿತಿಯ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನೇತೃತ್ವ ವಹಿಸಿದ್ದ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್‌ನ ಅಧ್ಯಕ್ಷ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಎಲ್ಲ ಜನಾಂಗದವರಿಗೆ ಧಾರ್ಮಿಕತೆಯ ಬಗ್ಗೆ ಮನವರಿಕೆ ಮಾಡುವುದು ಹಾಗೂ ಅದನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಿಕೊಂಡಾಗ ಉತ್ತಮವಾದ ಕಾರ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಂಜುನಾಥ ಹಳ್ಳೂರಮಠ, ಮೃತ್ಯುಂಜಯಭಿಕ್ಷಾವತಿಮಠ, ತೋಟಯ್ಯ ಗುಡ್ಡಿಮಠ, ಕೆ.ಎಸ್. ಹಿರೇಮಠ, ವೀರಯ್ಯ ಹೊಸಮಠ, ಲಿಂಗಯ್ಯ ಹಿರೇಮಠ, ವೀರಬಸಯ್ಯ ವಿರಕ್ತಮಠ ಸೇರಿ ಅನೇಕರು ಇದ್ದರು.

ವಟುಗಳಿಗೆ ಅಯ್ಯಾಚಾರ

25 ಜನ ಜಂಗಮ ವಟುಗಳಿಗೆ ಅಯ್ಯಾಚಾರ ಹಾಗೂ 10 ಭಕ್ತರಿಗೆ ಲಿಂಗದೀಕ್ಷೆ ನೀಡಲಾಯಿತು. ಜಂಗಮ ಸಮಾಜದ ಸಾಧಕರನ್ನು ಸನ್ಮಾನಿಸಲಾಯಿತು. ನಂತರ ಧರ್ಮಸಭೆ ಹಾಗೂ ಅನ್ನಮಹಾಪ್ರಸಾದ ಸೇವೆ ಜರುಗಿತು.

> ವಿಪರೀತ ಅಧಿಕಾರದ ಆಸೆಯಿಂದ ಕಾಂಗ್ರೆಸ್ ನಾಯಕರಲ್ಲಿ ತಿಕ್ಕಾಟ ಶುರುವಾಗಿದೆ. ಕ್ಯಾಬಿನೆಟ್ ಸಚಿವರು ತಮ್ಮ ಸ್ಥಾನ ಉಳಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಕೆಲವರು ಮೂರು ಬಾರಿ ಗೆದ್ದಿದ್ದೇವೆ, ನಮಗೆ ಸಚಿವ ಸ್ಥಾನ ಕೊಡಿ ಅಂತ ಕೇಳುತ್ತಾರೆ.
> • **ಬಸವರಾಜ ಬೊಮ್ಮಾಯಿ** ಸಂಸದ

ಸುದ್ದಿ ಸಿಂಚನ

ಇಂದು ಅಭಿನಂದನಾ ಸಮಾರಂಭ

ಮುಳಗುಂದ: ಪಟ್ಟಣದ ಸಿ.ಬಿ. ಬಡ್ನಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ 10ನೇ ತರಗತಿಯ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭವನ್ನು ಮೇ 4ರಂದು ಬೆಳಗ್ಗೆ 9.30ಕ್ಕೆ ಏರ್ಪಡಿಸಲಾಗಿದೆ. ಆಡಳಿತ ಮಂಡಳಿಯ ಸದಸ್ಯರು, ಸಿಬ್ಬಂದಿ ವರ್ಗ ಹಾಗೂ 10ನೇ ತರಗತಿಯ ವಿದ್ಯಾರ್ಥಿಗಳು ಪಾಲ್ಗೊಳ್ಳಬೇಕೆಂದು ಪ್ರಕಟಣೆ ತಿಳಿಸಿದೆ.

ಆ. 21ರಿಂದ ವಿಶೇಷ ಲೋಕ ಅದಾಲತ್

ಲಕ್ಷ್ಮೇಶ್ವರ: ದೇಶದ ಉಚ್ಚ ನ್ಯಾಯಾಲಯವು ವಿಶೇಷ ಲೋಕ ಅದಾಲತ್ ಕಾರ್ಯಕ್ರಮವನ್ನು ಆಗಸ್ಟ್ 21, 22 ಹಾಗೂ 23ರಂದು ಹಮ್ಮಿಕೊಳ್ಳುವ ಮೂಲಕ ಸುಪ್ರೀಂ ಕೋರ್ಟನಲ್ಲಿರುವ ರಾಜಿ ಸಂಧಾನ ಮಾಡಿಕೊಳ್ಳುವ ಕೇಸ್‌ಗಳನ್ನು ಇತ್ಯರ್ಥದ ಅವಕಾಶ ನೀಡಿದೆ. ಕಕ್ಷಿದಾರರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜೆಎಂಎಫ್‌ಸಿ ನ್ಯಾಯಾಲಯದ ಕಿರಿಯ ದಿವಾಣಿ ನ್ಯಾಯಾಧೀಶ ಸತೀಶ ಎಂ. ತಿಳಿಸಿದರು. ರಾಜ್ಯಾದ್ಯಂತ ನಡೆದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಅವರು ಮಾಹಿತಿ ನೀಡಿದರು. ಸುಪ್ರೀಂ ಕೋರ್ಟನಲ್ಲಿ ಬಾಕಿ ಇರುವ ರಾಜಿ ಸಂಧಾನಕ್ಕೆ ಯೋಗ್ಯವಾಗಿರುವ ಪ್ರಕರಣಗಳನ್ನು ವಿಶೇಷ ಲೋಕ ಅದಾಲತ್‌ನಲ್ಲಿ ಬಗೆಹರಿಸಿಕೊಳ್ಳುವ ಅವಕಾಶವನ್ನು ಆಗಸ್ಟ್ 21, 22 ಹಾಗೂ 23ರಂದು ನೀಡಿದೆ. ಸುಪ್ರೀಂ ಕೋರ್ಟನಲ್ಲಿ ಬಾಕಿ ಇರುವ ಪ್ರಕರಣಗಳನ್ನು ರಾಜಿ ಸಂಧಾನ ಮಾಡಿಕೊಳ್ಳುವ ಮೂಲಕ ಬಗೆಹರಿಸಿಕೊಳ್ಳುವುದರಿಂದ ಕಕ್ಷಿದಾರರ ಹಣ, ಸಮಯದ ಉಳಿತಾಯ ಮತ್ತು ಮಾನಸಿಕ ನೆಮ್ಮದಿ ದೊರೆಯುತ್ತದೆ ಎಂದರು.

ನಾಳೆ ಶಿವಾನುಭವ ಕಾರ್ಯಕ್ರಮ

ನರಗುಂದ: ತಾಲೂಕಿನ ಭೈರನಹಟ್ಟಿ ಗ್ರಾಮದ ದೊರೆಸ್ವಾಮಿ ವಿರಕ್ತಮಠದಲ್ಲಿ ಮಾಸಿಕ ಶಿವಾನುಭವ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ, ಸ್ವಾಮಿ ನಾದಬ್ರಹ್ಮಾನಂದ ಸ್ವಾಮಿಗಳ ಜಯಂತ್ಯುತ್ಸವ ಮತ್ತು 2026ನೇ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಮೇ 5ರಂದು ಬೆಳಗ್ಗೆ 9 ಗಂಟೆಗೆ ಜರುಗಲಿದೆ.

ಬಸಪ್ಪ ಮಜ್ಜಿಗುಡ್ಡ ನಿಧನ



ಲಕ್ಷ್ಮೇಶ್ವರ: ಪಟ್ಟಣದ ಹಳ್ಳದಕೇರಿಯ ನಿವಾಸಿ ಬಸಪ್ಪ ಶಿವಪ್ಪ ಮಜ್ಜಿಗುಡ್ಡ(62) ಅವರು ಭಾನುವಾರ ನಿಧನರಾದರು. ಮೃತರಿಗೆ ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳಿದ್ದಾರೆ.



ನರಗುಂದದಲ್ಲಿ ಸಿದ್ದೇಶ್ವರ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಉಚಿತ ಆರೋಗ್ಯ ತಪಾಸಣೆ ಕಾರ್ಯಕ್ರಮವನ್ನು ಪ್ರಾಂಶುಪಾಲ ಡಾ. ಆನಂದ ಲಾಲಸಂಗಿ ಉದ್ಘಾಟಿಸಿದರು.



ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಇತ್ತೀಚೆಗೆ ಡಾ. ಬಿ.ಆರ್. ಅಂಬೇಡ್ಕರ್ ಅವರ ಕುರಿತಾದ ಕ್ರಾಂತಿಗೀತೆ ಸ್ಪರ್ಧೆಯಲ್ಲಿ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ವಿದ್ಯಾರ್ಥಿನಿ ರಂಜಿತಾ ಕಡಿ ಅವರು ಪ್ರಥಮ ಸ್ಥಾನ ಪಡೆದಿದ್ದಾರೆ.



ಗದುಗಿನ ಒಕ್ಕಲಗೇರಿ ಕಮತರ್‌ಪ್ಲಾಟ್ ವಾರ್ಡ್ ನಂ. 21ರಲ್ಲಿ ಅಂಗನವಾಡಿ ಕೇಂದ್ರವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಉದ್ಘಾಟಿಸಿದರು. ಅಕ್ಬರಸಾಬ್ ಬಬರ್ಜಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ ಉಪಸ್ಥಿತರಿದ್ದರು.

ಕೃಷಿಗೆ ನಿರಂತರ, ಗುಣಮಟ್ಟದ ವಿದ್ಯುತ್ ಪೂರೈಕೆಗೆ ಪ್ರಾಧಾನ್ಯತೆ

ವಿದ್ಯುತ್ ವಿತರಣಾ ಕೇಂದ್ರ ನಿರ್ಮಾಣಕ್ಕೆ ಸಚಿವ ಎಚ್.ಕೆ. ಪಾಟೀಲ ಚಾಲನೆ



ಮುಳಗುಂದದಲ್ಲಿ ವಿದ್ಯುತ್ ಗ್ರಿಡ್ ನಿರ್ಮಾಣಕ್ಕೆ ಸಚಿವ ಡಾ. ಎಚ್.ಕೆ. ಪಾಟೀಲ ಭೂಮಿಪೂಜೆ ನೆರವೇರಿಸಿದರು.

> ಮುಳಗುಂದದಲ್ಲಿ ನಿರ್ಮಿಸಲಾಗುವ 2X20 ಎಂವಿಎ ಸಾಮರ್ಥ್ಯದ 110/11 ಕೆವಿ ವಿದ್ಯುತ್ ವಿತರಣಾ ಕೇಂದ್ರವು ಈ ಪ್ರದೇಶದ ವಿದ್ಯುತ್ ಸರಬರಾಜು ವ್ಯವಸ್ಥೆಗೆ ಮಹತ್ವದ ಬಲ ತುಂಬಲಿದೆ. ವಿಶೇಷವಾಗಿ ರೈತರಿಗೆ ನಿರಂತರ ಮತ್ತು ಗುಣಮಟ್ಟದ ವಿದ್ಯುತ್ ಲಭ್ಯವಾಗುವ ಮೂಲಕ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ದೊರೆಯಲಿದೆ.
> • **ಡಾ. ಎಚ್.ಕೆ. ಪಾಟೀಲ** ಜಿಲ್ಲಾ ಉಸ್ತುವಾರಿ ಸಚಿವ

• **ಕನ್ನಡಪ್ರಭ ವಾರ್ತೆ** ಮುಳಗುಂದ

ಪಟ್ಟಣದಲ್ಲಿ ವಿದ್ಯುತ್ ಗ್ರಿಡ್ ಸ್ಥಾಪನೆ ಕಳೆದ 20 ವರ್ಷಗಳ ಹೋರಾಟದ ಫಲವಾಗಿದೆ. ಇಂದು ಸಾಕಾರವಾಗುತ್ತಿರುವುದು ಅತ್ಯಂತ ಸಂತಸದ ಸಂಗತಿ. ಅಂದಾಜು ₹16.71 ಕೋಟಿ ಮೊತ್ತದ ಯೋಜನೆ ಈ ಭಾಗದ ರೈತರು ಹಾಗೂ ಸಾರ್ವಜನಿಕರಿಗೆ ಬಹಳ ಉಪಯುಕ್ತವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ಪಟ್ಟಣದಲ್ಲಿ ಭಾನುವಾರ ಅಂದಾಜು ₹16.71 ಕೋಟಿ ವೆಚ್ಚದ 2x20 ಎಂವಿಎ ಸಾಮರ್ಥ್ಯದ 110/11 ಕೆವಿ ವಿದ್ಯುತ್ ವಿತರಣಾ ಕೇಂದ್ರ ನಿರ್ಮಾಣ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಮುಳಗುಂದದಲ್ಲಿ ನಿರ್ಮಿಸಲಾಗುವ 2x20 ಎಂವಿಎ ಸಾಮರ್ಥ್ಯದ 110/11 ಕೆವಿ ವಿದ್ಯುತ್ ವಿತರಣಾ ಕೇಂದ್ರವು ಈ ಪ್ರದೇಶದ ವಿದ್ಯುತ್ ಸರಬರಾಜು ವ್ಯವಸ್ಥೆಗೆ ಮಹತ್ವದ ಬಲ ತುಂಬಲಿದೆ. ವಿಶೇಷವಾಗಿ ರೈತರಿಗೆ ನಿರಂತರ ಮತ್ತು ಗುಣಮಟ್ಟದ ವಿದ್ಯುತ್ ಲಭ್ಯವಾಗುವ ಮೂಲಕ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ದೊರೆಯಲಿದೆ. ಈ ಗ್ರಿಡ್ ಕಾಮಗಾರಿ ಒಂದು ವರ್ಷದೊಳಗೆ ಪೂರ್ಣಗೊಳ್ಳುವ ವಿಶ್ವಾಸವಿದ್ದು, ಮುಂದಿನ ವರ್ಷದ ಮೇ 1ರೊಳಗೆ ಲೋಕಾರ್ಪಣೆ ಮಾಡುವ ಗುರಿ ಹೊಂದಲಾಗಿದೆ ಎಂದರು.

ಮುಳಗುಂದದ ಜನರು ಜಾಣರು. ದೊಡ್ಡ ಮೊತ್ತದ ಯೋಜನೆಗಳನ್ನು ಒಟ್ಟಾಗಿ ಸಾಧಿಸುವ ಸಾಮರ್ಥ್ಯ ಹೊಂದಿದ್ದಾರೆ. ಇದೇ ಕಾರಣಕ್ಕೆ ವಿಜ್ ಟು ವ್ಯಾಲಿ ಯೋಜನೆಯಂತಹ ₹20 ಕೋಟಿ ಯೋಜನೆಯೂ ಯಶಸ್ವಿಯಾಗಿ ಅನುಷ್ಠಾನಗೊಂಡಿದೆ ಎಂದರು.

ನಂತರ ಜೈನ ಬಸದಿ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು. ಪಟ್ಟಣದ ಅಂಗನವಾಡಿ ಕೇಂದ್ರ-323 ಕಟ್ಟಡ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಯಿತು. ಶ್ರೀ ಪುರದ ಬಸವೇಶ್ವರ ಸಮುದಾಯ ಭವನ ನಿರ್ಮಾಣಕ್ಕೂ ಶಂಕುಸ್ಥಾಪನೆ ನೆರವೇರಿಸಲಾಯಿತು.

ಹೆಸ್ಕಾಂ ಅಧ್ಯಕ್ಷ ಅಜೀಮ್‌ಪೀರ್‌ಎಸ್. ಖಾದ್ರಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಸುಂಕಾಪುರ, ಶಿವಣ್ಣ ನೀಲಗುಂದ, ಎಂ.ಡಿ. ಬಟ್ಟೂರ, ವಿಜಯ ನೀಲಗುಂದ, ಇಮ್ಮಣ್ಣ ಚವಳಿಕಾಯಿ, ಎನ್.ಆರ್. ದೇಶಪಾಂಡೆ, ಅಶೋಕ ಹುಣಸಿಮರದ, ಅಜ್ಜಪ್ಪ ಹುಗ್ಗೇಣ್ಣವರ, ಬಸವರಾಜ ಬಾತಾಖಾನಿ, ಬಸವರಾಜ ಬಡ್ನಿ, ಮನಸೂರ ಹಣಗಿ, ಕೆ.ಎಲ್. ಕರಿಗೌಡರ, ಪ್ರವಾಸೋದ್ಯಮ ಇಲಾಖೆಯ ಕೊಟ್ರೇಶ ವಿಭೂತಿ ಸೇರಿದಂತೆ ಅಧಿಕಾರಿಗಳು, ಪಪಂ ಮಾಜಿ ಸದಸ್ಯರು, ಗಣ್ಯರು ಇದ್ದರು.

ಗದುಗಿನಲ್ಲಿ ಕಾಮನವೆಲ್ತ್ ವಾಲಿಬಾಲ್ ಪಂದ್ಯ ಶೀಘ್ರ

2030ರ ವೇಳೆಗೆ ಗದುಗಿನಲ್ಲಿ ರಣಜಿ ಪಂದ್ಯ: ಎಚ್.ಕೆ. ಪಾಟೀಲ

• **ಕನ್ನಡಪ್ರಭ ವಾರ್ತೆ** ಗದಗ

ಗದುಗಿನಲ್ಲಿ ಬರುವ ಸೆಪ್ಟೆಂಬರ್, ಅಕ್ಟೋಬರ್‌ನಲ್ಲಿ ಕಾಮನವೆಲ್ತ್ ದೇಶಗಳ ವಾಲಿಬಾಲ್ ಚಾಂಪಿಯನ್ ಶಿಪ್ ಪಂದ್ಯಾವಳಿ ಆಯೋಜನೆ ಮಾಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಶನಿವಾರ ರಾತ್ರಿ ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್- 2ರ ಚಾಂಪಿಯನ್ ಎಲೈಟ್ ಇಲೆವೆನ್ ತಂಡಕ್ಕೆ ಟ್ರೋಫಿ ವಿತರಿಸಿ ಮಾತನಾಡಿದರು.

ಕಳೆದ 18 ದಿನಗಳ ಕಾಲ ನಡೆದ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್- 2ರ ಕ್ರಿಕೆಟ್ ಪಂದ್ಯಾವಳಿ ಮನರಂಜನೆ ಮಾತ್ರವಲ್ಲ. ಕ್ರಿಕೆಟ್ ಆಟದಲ್ಲಿ ಗದುಗಿನ ಆಟಗಾರರು ಯಾವ ರೀತಿ ನೈಪುಣ್ಯತೆ ಹೊಂದಿದ್ದಾರೆಂದು ತೋರಿಸಿದ್ದೀರಿ. ಒಂದೆಡೆ ಐಪಿಎಲ್ ಪಂದ್ಯಾವಳಿ ಅಬ್ಬರದಿಂದ ನಡೆಯುತ್ತಿದ್ದರೆ, ಗದುಗಿನಲ್ಲಿ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಪಂದ್ಯಾವಳಿ ನಡೆಯುತ್ತಿದ್ದರೂ ಗದುಗಿನ ಆಟಗಾರರು ಯಾವುದಕ್ಕೂ ಕಡಿಮೆ ಏನಿಲ್ಲ ಎನಿಸುತ್ತಿತ್ತು ಎಂದರು.

ಪಂದ್ಯಾವಳಿಯಲ್ಲಿ ಗದುಗಿನ ಆಟಗಾರರು ಬಹಳ ಉತ್ತಮದರ್ಜೆಯ ಆಟವನ್ನು ಪ್ರದರ್ಶನ ಮಾಡಿದ್ದು, ಖ್ಯಾತ ಕ್ರಿಕೆಟಿಗ ಸುನಿಲ್ ಜೋಶಿ ಅವರು ಕೂಡ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

2030ರ ವೇಳೆಗೆ ಗದುಗಿನಲ್ಲಿ ರಣಜಿ ಪಂದ್ಯ ನಡೆಯಬೇಕು ಎನ್ನುವ ಸಂಕಲ್ಪ ಮಾಡಿದ್ದು, ಅದನ್ನು ಮತ್ತಷ್ಟು ತೀವ್ರವಾಗಿ ಅನುಷ್ಠಾನಗೊಳಿಸಲಾಗುವುದು ಎಂದು ಭರವಸೆ ನೀಡಿದ ಅವರು, ಮುಂದಿನ ಸೆಪ್ಟೆಂಬರ್, ಅಕ್ಟೋಬರ್‌ನಲ್ಲಿ ಕಾಮನವೆಲ್ತ್ ದೇಶಗಳ ವಾಲಿಬಾಲ್ ಚಾಂಪಿಯನ್‌ಶಿಪ್ ನಡೆಸಲು ರಾಷ್ಟ್ರೀಯ ವಾಲಿಬಾಲ್ ಸಂಸ್ಥೆ ಇಚ್ಛಿಸಿದ್ದು, ನಿಮ್ಮೆಲ್ಲರ ಇಚ್ಛಾಶಕ್ತಿಯಿಂದ ನಡೆಯುವಂತಾಗಲಿ ಎಂದು ಹಾರೈಸಿದರು.

ರಾಜ್ಯ ವೀಕೇಂದ್ರಿಕಾರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಜಿ, ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್‌ನ ಸಂಘಟಕ ಕೃಷ್ಣಗೌಡ ಪಾಟೀಲ, ಸಚಿನ್ ಪಾಟೀಲ, ಸರ್ಫರಾಜ್ ಶೇಖ್, ಜಿಪಂ ಮಾಜಿ ಅಧ್ಯಕ್ಷ ಸಿದ್ದಲಿಂಗೇಶ್ವರ ಪಾಟೀಲ, ಮಿಥುನ್ ಪಾಟೀಲ, ಅಕ್ಷಯ ಪಾಟೀಲ, ಅಶೋಕ ಮಂದಾಲಿ ಸೇರಿ 20 ತಂಡಗಳ ಮಾಲೀಕರು, ಕ್ರಿಕೆಟ್ ಅಭಿಮಾನಿಗಳು ಪಾಲ್ಗೊಂಡಿದ್ದರು.



ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿದರು.

> ಜಿಲ್ಲೆಯು ಕ್ರೀಡಾ ನಗರವಾಗಲು ಸ್ವಲ್ಪ ಹತ್ತಿರದಲ್ಲಿದ್ದು, ಮುಂದಿನ ದಿನಗಳಲ್ಲಿ ಕ್ರೀಡಾನಗರವನ್ನಾಗಿಸುವ ನಾವೆಲ್ಲರೂ ಶ್ರಮಿಸೋಣ. ಇದಕ್ಕಾಗಿ ಸೂಕ್ತ ಸಿದ್ಧತೆ ಮಾಡಿಕೊಳ್ಳೋಣ.
> • **ಎಚ್.ಕೆ. ಪಾಟೀಲ** ಕಾನೂನು ಸಚಿವ

ಕಾಂಗ್ರೆಸ್ಸಿನಲ್ಲಿ ಗಾಂಧಿ ಕುಟುಂಬದ ಮನಸು ಗೆದ್ದವರು ಸಿಎಂ ಆಗ್ತಾರೆ

ಅಧಿಕಾರದ ಆಸೆಯಿಂದ ಕಾಂಗ್ರೆಸ್ ನಾಯಕರಲ್ಲಿ ತಿಕ್ಕಾಟ: ಸಂಸದ ಬಸವರಾಜ ಬೊಮ್ಮಾಯಿ

• **ಕನ್ನಡಪ್ರಭ ವಾರ್ತೆ** ಗದಗ



ಕಾಂಗ್ರೆಸ್ಸಿನಲ್ಲಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಮನಸ್ಸು ಯಾರು ಗೆಲ್ಲುತ್ತಾರೆಯೋ ಅವರು ಸಿಎಂ ಆಗುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಪರೀತ ಅಧಿಕಾರದ ಆಸೆಯಿಂದ ಕಾಂಗ್ರೆಸ್ ನಾಯಕರಲ್ಲಿ ತಿಕ್ಕಾಟ ಶುರುವಾಗಿದೆ. ಕ್ಯಾಬಿನೆಟ್ ಸಚಿವರು ತಮ್ಮ ಸ್ಥಾನ ಉಳಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಕೆಲವರು ಮೂರು ಬಾರಿ ಗೆದ್ದಿದ್ದೇವೆ, ನಮಗೆ ಸಚಿವ ಸ್ಥಾನ ಕೊಡಿ ಅಂತ ಕೇಳುತ್ತಾರೆ.

ಹೊಸಬರು ತಮಗೂ ಸಚಿವ ಸ್ಥಾನ ಕೇಳುತ್ತಿದ್ದಾರೆ. ಮುಖ್ಯಮಂತ್ರಿ ತಮ್ಮ ಕುರ್ಚಿ ಉಳಿಸಿಕೊಳ್ಳಲು ಪ್ರಯತ್ನ ನಡೆಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರು ಬಹಳ ಹಿರಿಯರು. ಅವರು ತಮಗೆ ನ್ಯಾಯಸಮ್ಮತವಾಗಿ ಸಿಎಂ ಸ್ಥಾನ ಸಿಗಬೇಕು ಎಂಬ ನೋವು ಅವರ ಮನಸ್ಸಿನಲ್ಲಿದೆ. ಅದಕ್ಕಾಗಿ ಆ ಭಾವನೆ ವ್ಯಕ್ತಪಡಿಸಿದ್ದಾರೆ ಎಂದರು.

ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ ಹೈಕಮಾಂಡ್ ಅಂದರೆ ರಾಹುಲ್ ಗಾಂಧಿ, ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅಂತಾರೆ. ಮಲ್ಲಿಕಾರ್ಜುನ ಖರ್ಗೆ ಅವರು ಹೈಕಮಾಂಡ್ ಅಂದರೆ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಅಂತಾರೆ. ಇದೊಂದು ಕುಟುಂಬ ಆಧರಿತ ಪಕ್ಷ ಎಂದು ಲೇವಡಿ ಮಾಡಿದರು.

ಸಿದ್ದರಾಮಯ್ಯ ಅವರು ಕಳೆದ ಬಜೆಟ್‌ನಲ್ಲಿ ನೀಡಿದ್ದ ಸುಮಾರು ₹14 ಸಾವಿರ ಕೋಟಿ ಬಳಕೆ ಮಾಡಿಲ್ಲ. ಅದರ ಹಿಂದಿನ ವರ್ಷವೂ ಸುಮಾರು ₹10 ಸಾವಿರ ಕೋಟಿ ಬಳಕೆಯಾಗಿಲ್ಲ.

ರಾಜಕೀಯವಾಗಿ ತಿಕ್ಕಾಟ ಮಾಡಿದರೆ ಅಧಿಕಾರಿಗಳು ಹೇಗೆ ಕೆಲಸ ಮಾಡುತ್ತಾರೆ? ಮುಖ್ಯಮಂತ್ರಿ ಒಂದು ಹೇಳಿದರೆ, ಉಪಮುಖ್ಯಮಂತ್ರಿ ಮತ್ತೊಂದು ಹೇಳುತ್ತಾರೆ, ಜನರ ದೃಷ್ಟಿಯಿಂದ ಈ ಸರ್ಕಾರ ಸಂಪೂರ್ಣ ನಿಂತು ಹೋಗಿದೆ ಎಂದು ಆರೋಪಿಸಿದರು.

ಹಿರಿಯ ನ್ಯಾಯವಾದಿ ವಿ.ಆರ್. ಗುಡಿಸಾಗರ ನಿಧನ

• **ಕನ್ನಡಪ್ರಭ ವಾರ್ತೆ** ರೋಣ



ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ, ಕೆಎಸ್‌ಡಿಎಲ್‌ನ ಮಾಜಿ ಅಧ್ಯಕ್ಷ, ರಾಜೀವಗಾಂಧಿ ಶಿಕ್ಷಣ ಸಂಸ್ಥೆ ನಿರ್ದೇಶಕ, ಶ್ರೀ ಗುರುಪಾದೇಶ್ವರ ಐಟಿಐ ಕಾಲೇಜಿನ ಚೇರಮನ್, ಹಿರಿಯ ನ್ಯಾಯವಾದಿ ವಿ.ಆರ್. ಗುಡಿಸಾಗರ(81) ಭಾನುವಾರ ನಿಧನರಾದರು.

ಅವರಿಗೆ ಇಬ್ಬರು ಪುತ್ರರು, ಓರ್ವ ಪುತ್ರಿ, ಪತ್ನಿ ಸೇರಿದಂತೆ ಅಪಾರ ಬಂಧುಗಳಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 1 ಗಂಟೆಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ವಿ.ಆರ್. ಗುಡಿಸಾಗರ ಅವರು ಶಾಸಕ ಜಿ.ಎಸ್. ಪಾಟೀಲ ಅವರ ಆಪ್ತ ಸ್ನೇಹಿತರಾಗಿದ್ದರು.

ಕಳೆದ ನಾಲ್ಕೂವರೆ ದಶಕ ಕಾಂಗ್ರೆಸ್‌ನಲ್ಲಿ ಸಂಘಟನೆಯಲ್ಲಿ ಸಕ್ರಿಯವಾಗಿ ದುಡಿದಿದ್ದಾರೆ. ನ್ಯಾಯವಾದಿಗಳಾಗಿ ಸಲ್ಲಿಸಿದ ಸೇವೆ ಅನುಪಮವಾಗಿದೆ.

ಸಂತಾಪ: ಸಚಿವ ಎಚ್.ಕೆ. ಪಾಟೀಲ, ಮಾಜಿ ಸಂಸದ ಆರ್.ಎಸ್. ಪಾಟೀಲ, ಜಿಲ್ಲಾ ಕಾಂಗ್ರೆಸ್ ಕಮಿಟಿ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ, ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ಗ್ಯಾರಂಟಿ ಯೋಜನೆ ಸಮಿತಿ ತಾಲೂಕು ಅಧ್ಯಕ್ಷ ಮಿಥುನ ಪಾಟೀಲ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ವಿ.ಬಿ. ಸೋಮನಕಟ್ಟಿಮಠ, ಅಕ್ಷಯ ಪಾಟೀಲ, ಪ್ರಭು ಮೇಟಿ, ಕುರುಬ ಸಮಾಜ ರೋಣ ತಾಲೂಕು ಅಧ್ಯಕ್ಷ ಬಸವರಾಜ ಜಗ್ಗಲ, ಶರಣಗೌಡ ಪಾಟೀಲ ಸರ್ಜಾಪೂರ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ರಮೇಶ ಪಲ್ಲೇದ, ಉಪಾಧ್ಯಕ್ಷ ಯಚ್ಚರಗೌಡ ಗೋವಿಂದಗೌಡ್ರ, ದಶರಥ ಗಾಣಿಗೇರ, ಪರಶುರಾಮ ಅಳಗವಾಡಿ, ವೀರಣ್ಣ ಯಾಳಗಿ, ಸಿದ್ದಣ್ಣ ಯಾಳಗಿ, ಡಾ. ಐ.ಬಿ. ಕೊಟ್ಟೂರಶೆಟ್ಟಿ, ಡಾ. ವೈ.ಎನ್. ಪಾಪಣ್ಣವರ, ಮೌನೇಶ ಹಾದಿಮನಿ ಸಂತಾಪ ಸೂಚಿಸಿದ್ದಾರೆ.

ಸಂಭ್ರಮ... ಜಾನಪದ ಸಂಭ್ರಮ ಕಾರ್ಯಕ್ರಮದಲ್ಲಿ ವಿದ್ಯಾಧರ ದೊಡ್ಡಮನಿ

ಸಾಂಸ್ಕೃತಿಕ ಕಲೆ ನಾಡಿನ ಇತಿಹಾಸದ ಪ್ರತಿಬಿಂಬ

• **ಕನ್ನಡಪ್ರಭ ವಾರ್ತೆ** ಗದಗ

ನಾಡಿನ ಇತಿಹಾಸವನ್ನು ತಿಳಿಯಬೇಕಾದರೆ ಸ್ಥಳೀಯ ಕಲೆ, ಸಾಹಿತ್ಯ, ಸಂಗೀತ ಮತ್ತು ನೃತ್ಯ ಅದರ ಜತೆಗೆ ಭಾಷೆಯ ಬೆಳವಣಿಗೆ ಅತ್ಯಂತ ಮುಖ್ಯವಾಗಿರುತ್ತದೆ. ಅಂತೆಯೇ ಆ ಪ್ರದೇಶದ ಭೌಗೋಳಿಕ ಶ್ರೀಮಂತಿಕೆಯಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು ನಾಡಿನ ಇತಿಹಾಸವನ್ನು ಸಾರುತ್ತವೆ ಎಂದು ತಾಪಂ ಮಾಜಿ ಅಧ್ಯಕ್ಷ ವಿದ್ಯಾಧರ ದೊಡ್ಡಮನಿ ತಿಳಿಸಿದರು.

ತಾಲೂಕಿನ ಕೋಟುಮಚಗಿ ಗ್ರಾಮದಲ್ಲಿ ಸೊಮೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಜೇನುಗೂಡು ಜಾನಪದ ಕಲಾತಂಡ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯದ ಆಶ್ರಯದಲ್ಲಿ ನಡೆದ ಜಾನಪದ ಸಂಭ್ರಮ- 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಾದೇವಗೌಡ ಜಿ. ಪಾಟೀಲ ಮಾತನಾಡಿ, ಜಾನಪದ ಸಾಹಿತ್ಯ ಈ ನೆಲದ ಅಸ್ಮಿತೆಯನ್ನು ತೋರುವ ಒಂದು ಸಾಧನ. ಎಲ್ಲರೂ ಒಂದೆಡೆಗೆ ಸೇರಿ ಖುಷಿ ಹಂಚಿಕೊಳ್ಳುವ ವೇದಿಕೆ ನಿರ್ಮಿಸುವ ಶಕ್ತಿ ಈ ಜಾನಪದ ಕಲೆಗೆ ಇದೆ ಎಂದರು.

ಭೈರನಹಟ್ಟಿಯ ಶಾಂತಲಿಂಗ ಸ್ವಾಮಿಗಳು ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ಸೊಮೇಶ್ವರನ ಜಾತ್ರಾ ಮಹೋತ್ಸವ ಅತ್ಯಂತ ಸಂಭ್ರಮ, ಸಡಗರದ ಜತೆಗೆ ಜಾನಪದ ಸಂಭ್ರಮವನ್ನು ಹುಯಿಲಗೋಳ ಗ್ರಾಮದ ಜೇನಗೂಡು ಜಾನಪದ ಕಲಾತಂಡದವರು ಅತ್ಯಂತ ಅಚ್ಚುಕಟ್ಟಾಗಿ ಆಯೋಜಿಸಿದ್ದಾರೆ ಎಂದರು.

ಅಧ್ಯಕ್ಷತೆಯನ್ನು ಬಸವರಾಜ ಈರಣ್ಣವರ ವಹಿಸಿದ್ದರು. ಹಿರಿಯರಾದ ಫಕೀರಯ್ಯ ಹಿರೇಮಠ, ಧರ್ಮೇಂದ್ರ ಇಟಗಿ, ಪ್ರಭು ಪಡಸಲಗಿ, ಗಂಗಾಧರಯ್ಯ ಹಿರೇಮಠ, ಈರಣ್ಣ ಬಾಚಲಾಪೂರ, ಜಯಪ್ರಕಾಶ ಭಜಂತ್ರಿ, ರವಿ ಸೋಮನಗೌಡರ, ರಮೇಶ ಅಕ್ಕಿ, ಮಲ್ಲಿಕಾರ್ಜುನ ಅಣ್ಣಿಗೇರಿ ಮುಂತಾದವರು ಇದ್ದರು. ಬಾಬು ಚಲವಾದಿ ಸ್ವಾಗತಿಸಿದರು. ಶಿಕ್ಷಕ ಎಸ್.ಎಸ್. ಸಂಕನಗೌಡರ ನಿರೂಪಿಸಿದರು. ಶಿವಾನಂದ ಕಿನ್ನಾಳ ವಂದಿಸಿದರು. ನಂತರ ಜಾನಪದ ಸಂಭ್ರಮ ಜರುಗಿತು.



ಗದಗ ತಾಲೂಕಿನ ಕೋಟುಮಚಗಿ ಗ್ರಾಮದಲ್ಲಿ ಜಾನಪದ ಸಂಭ್ರಮ-2026 ಕಾರ್ಯಕ್ರಮ ನಡೆಯಿತು.

> ■ ಜಾನಪದ ಸಾಹಿತ್ಯ ಈ ನೆಲದ ಅಸ್ಮಿತೆಯನ್ನು ತೋರುವ ಒಂದು ಸಾಧನ. ಎಲ್ಲರೂ ಒಂದೆಡೆಗೆ ಸೇರಿ ಖುಷಿ ಹಂಚಿಕೊಳ್ಳುವ ವೇದಿಕೆ ನಿರ್ಮಿಸುವ ಶಕ್ತಿ ಈ ಜಾನಪದ ಕಲೆಗೆ ಇದೆ

ರಕ್ತದಾನದಿಂದ ಆರೋಗ್ಯ ಸಮಸ್ಯೆ ಆಗದು: ಡಾ. ರೇಣುಕಾ

• **ಕನ್ನಡಪ್ರಭ ವಾರ್ತೆ** ನರಗುಂದ

ರಕ್ತದಾನ ಮಾಡಿದರೆ ಆರೋಗ್ಯ ತೊಂದರೆ ಉಂಟಾಗುತ್ತದೆ ಎಂದು ಕೆಲವರು ರಕ್ತದಾನ ಮಾಡಲು ಹಿಂಜರಿಯುತ್ತಾರೆ. ಆದರೆ ರಕ್ತದಾನ ಮಾಡುವುದರಿಂದ ಮನುಷ್ಯನಿಗೆ ಯಾವುದೇ ರೀತಿ ತೊಂದರೆಯಾಗುವುದಿಲ್ಲವೆಂದು ತಾಲೂಕು ಆರೋಗ್ಯ ಅಧಿಕಾರಿ ಡಾ. ರೇಣುಕಾ ಕೊರವನವರ ತಿಳಿಸಿದರು.

ಪಟ್ಟಣದ ಸಿದ್ದೇಶ್ವರ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಉಚಿತ ಆರೋಗ್ಯ ತಪಾಸಣಾ ಮತ್ತು ಸ್ವಯಂಪ್ರೇರಿತ ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿ, ರಕ್ತದಾನ ಮಾಡುವುದರಿಂದ ಒಂದು ಜೀವವನ್ನು ಉಳಿಸಬಹುದು ಎಂದರು.

ಆಪ್ತ ಸಮಾಲೋಚಕ ಎಸ್.ಬಿ. ಪಾಟೀಲ ಮಾತನಾಡಿ, ರಕ್ತದಾನದ ಮಹತ್ವ, ರಕ್ತದಾನ ಮಾಡುವುದರಿಂದ ಮನುಷ್ಯನ ಆರೋಗ್ಯದ ಮೇಲಾಗುವ ಪ್ರಯೋಜನಗಳ ಬಗ್ಗೆ ತಿಳಿಸಿದರು.

ಪ್ರಾಂಶುಪಾಲ ಡಾ. ಆನಂದ ಕುಮಾರ ಎಸ್. ಲಾಲಸಂಗಿ ಮಾತನಾಡಿ, ರಕ್ತದಾನ ಮಾಡಿ ತಮ್ಮ ಆರೋಗ್ಯವನ್ನು ವೃದ್ಧಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳಾದ ಡಾ. ಶ್ವೇತಾ ಪಾಟೀಲ್, ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ. ಜಗದೀಶ ತಳವಾರ, ಡಾ. ರಾಮು ಎಂ.ಎಸ್., ಪ್ರೊ. ಫಕೀರಬಿ ನದಾಫ್, ಆಪ್ತ ಸಮಾಲೋಚಕ ಎನ್.ಎಲ್. ಮಡಿವಾಳರ, ಎಸ್ .ಬಿ. ಪಾಟೀಲ್ ಮತ್ತು ಜಿಲ್ಲಾ ಆಸ್ಪತ್ರೆಯ ಸಿಬ್ಬಂದಿ, ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಇದ್ದರು.